ಕರ್ನಾಟಕ ವಿಧಾನ ಪರಿಷತ್ತು

VLS 27/01/2022

1. ಸದಸ್ಯರ ಹೆಸರು : ಶ್ರೀ ಮಾನೆ ಶ್ರೀನಿವಾಸ್
2. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1570
3. ಉತ್ತರಿಸಬೇಕಾದ ದಿನಾಂಕ : 24-09-2021

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ 2019-20, 2020-21 ಹಾಗೂ 2021-22ನೇ ಸಾಲಿನಲ್ಲಿ ಹಾವೇರಿ, ಗದಗ ಹಾಗೂ ಧಾರವಾಡ ಜಿಲ್ಲೆಗಳ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ಕೈಗೊಳ್ಳಲಾದ ಒಟ್ಟು ಕಾಮಗಾರಿಗಳು ಎಷ್ಟು;</td><td>ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ 2019-20, 2020-21 ಹಾಗೂ 2021-22ನೇ ಸಾಲಿನಲ್ಲಿ ಹಾವೇರಿ, ಗದಗ ಹಾಗೂ ಧಾರವಾಡ ಜಿಲ್ಲೆಗಳ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ಕೈಗೊಳ್ಳಲಾದ ಕಾಮಗಾರಿಗಳ ವಿವರ.
<table>
<tr><th rowspan="2">ಕ್ರ.ಸಂ</th><th rowspan="2">ಜಿಲ್ಲೆ</th><th colspan="3">ಕೈಗೊಳ್ಳಲಾದ ಕಾಮಗಾರಿಗಳ ಸಂಖ್ಯೆ ವರ್ಷವಾರು</th></tr>
<tr><th>2019-20</th><th>2020-21</th><th>2021-22</th></tr>
<tr><td>1</td><td>ಗದಗ</td><td>6219</td><td>7590</td><td>8739</td></tr>
<tr><td>2</td><td>ಧಾರವಾಡ</td><td>11457</td><td>29522</td><td>17516</td></tr>
<tr><td>3</td><td>ಹಾವೇರಿ</td><td>10338</td><td>24435</td><td>54748</td></tr>
</table></td></tr>
<tr><td>ಆ)</td><td>ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ 2019-20, 2020-21 ಹಾಗೂ 2021-22ನೇ ಸಾಲಿನಲ್ಲಿ ಹಾವೇರಿ, ಗದಗ ಹಾಗೂ ಧಾರವಾಡ ಜಿಲ್ಲೆಗಳ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ಬಾಕಿ ಉಳಿದಿರುವ ಕೂಲಿ ಹಾಗೂ ಸಲಕರಣೆಗಳಿಗೆ ಬರಬೇಕಾದ ಒಟ್ಟು ಬಾಕಿ ಮೊತ್ತ ಎಷ್ಟು;</td><td>ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ 2019-20, 2020-21 ಹಾಗೂ 2021-22ನೇ ಸಾಲಿನಲ್ಲಿ ಹಾವೇರಿ, ಗದಗ ಹಾಗೂ ಧಾರವಾಡ ಜಿಲ್ಲೆಗಳ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ಬಾಕಿ ಉಳಿದಿರುವ ಕೂಲಿ ಹಾಗೂ ಸಲಕರಣೆಗಳಿಗೆ ಬಾಕಿ ಇರುವ ಮೊತ್ತದ ವಿವರ. (ರೂ. ಲಕ್ಷಗಳಲ್ಲಿ)
<table>
<tr><th rowspan="2">ಕ್ರ.ಸಂ</th><th rowspan="2">ಜಿಲ್ಲೆ</th><th colspan="2">2019-20</th><th colspan="2">2020-21</th><th colspan="2">2021-22</th></tr>
<tr><th>ಕೂಲಿ</th><th>ಸಾಮಗ್ರಿ</th><th>ಕೂಲಿ</th><th>ಸಾಮಗ್ರಿ</th><th>ಕೂಲಿ</th><th>ಸಾಮಗ್ರಿ</th></tr>
<tr><td>1</td><td>ಗದಗ</td><td>2.86</td><td>82.51</td><td>14.33</td><td>181.6</td><td>101.27</td><td>691.92</td></tr>
<tr><td>2</td><td>ಧಾರವಾಡ</td><td>0.00</td><td>56.53</td><td>0.00</td><td>275.76</td><td>151.48</td><td>1305.43</td></tr>
<tr><td>3</td><td>ಹಾವೇರಿ</td><td>30.43</td><td>118.37</td><td>91.09</td><td>249.39</td><td>310.58</td><td>2999.53</td></tr>
</table></td></tr>
<tr><td>ಇ)</td><td>ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ 2019-20, 2020-21 ಹಾಗೂ 2021-22ನೇ ಸಾಲಿನಲ್ಲಿ ಹಾವೇರಿ, ಗದಗ ಹಾಗೂ ಧಾರವಾಡ ಜಿಲ್ಲೆಗಳ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ಬಾಕಿ ಉಳಿದಿರುವ ಕೂಲಿ ಹಾಗೂ ಸಲಕರಣೆಗಳ ಬಾಕಿ ಮೊತ್ತವನ್ನು ಯಾವಾಗ ಬಿಡುಗಡೆಗೊಳಿಸಲಾಗುವುದು?</td><td>ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಕೆಲಸ ಮಾಡಿದ ಕೂಲಿಕಾರರಿಗೆ ನಿಗದಿತ ಕಾಲ ಮಿತಿಯೊಳಗೆ ಕೂಲಿ ಪಾವತಿಸಲಾಗುತ್ತಿದೆ. ಆಗಸ್ಟ್ ತಿಂಗಳಿನಲ್ಲಿ ಕೇಂದ್ರ ಸರ್ಕಾರದಿಂದ ಅನುದಾನ ಬಿಡುಗಡೆಯಲ್ಲಿ ವಿಳಂಬವಾದ ಕಾರಣ ಕೂಲಿ ಪಾವತಿಯಲ್ಲಿ ವಿಳಂಬವಾಗಿತ್ತು. ಪ್ರಸ್ತುತ ಕೇಂದ್ರ ಸರ್ಕಾರವು ಅನುದಾನ ಬಿಡುಗಡೆ ಮಾಡಿದ್ದು, ಬಾಕಿ ಇದ್ದ ಕೂಲಿ ಹಣವನ್ನು ಪಾವತಿಸಲಾಗಿರುತ್ತದೆ. ಅದರಂತೆ, ಕೇಂದ್ರ ಸರ್ಕಾರದಿಂದ ಅನುದಾನ ಬಿಡುಗಡೆಯಾದಂತೆ ಹಂತಹಂತವಾಗಿ ಹಾವೇರಿ, ಗದಗ ಹಾಗೂ ಧಾರವಾಡ ಜಿಲ್ಲೆಗಳ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ಬಾಕಿ ಉಳಿದಿರುವ ಕೂಲಿ ಹಾಗೂ ಸಲಕರಣೆಗಳ ಬಾಕಿ ಮೊತ್ತವನ್ನು ಬಿಡುಗಡೆಗೊಳಿಸಲಾಗುವುದು.</td></tr>
</table>

ಸಂಖ್ಯೆ: ಗ್ರಾಅಪ 61(30) ಉಖಾಯೋ 2021

(ಕೆ.ಎಸ್.ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು